ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.**

ಸಂಖ್ಯೆ:ಸಿ5[1] ಸಿಸಿಟಿ.ಸ/74/2019-20 ದಿನಾಂಕ: 15-06-2020

**ಸುತ್ತೋಲೆ**

ವಿಷಯ: ಸಾರ್ವಜನಿಕ ಶಿಕ್ಷಣ ಇಲಾಖೆಯ ದ್ವಿತೀಯ ದರ್ಜೆ ಸಹಾಯಕರ ಮತ್ತು ದ್ವಿತೀಯ ದರ್ಜೆ ಸಹಾಯಕರು ಸಹಿತ ಬೆರಳಚ್ಚುಗಾರರ ಹುದ್ದೆಗಳನ್ನು ವಿಲೀನಗೊಳಿಸುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು-560001 ಇವರ ಪತ್ರ ಸಂಖ್ಯೆ: ಜಿಇಎ216/2019-20 ದಿನಾಂಕ: 12/02/2020

*****

ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ದ್ವಿತೀಯ ದರ್ಜೆ ಸಹಾಯಕರು ಮತ್ತು ದ್ವಿತೀಯ ದರ್ಜೆ ಸಹಾಯಕರು ಸಹಿತ ಬೆರಳಚ್ಚುಗಾರರ ಪ್ರತ್ಯೇಕ ವೃಂದಗಳಿದ್ದು ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಬಡ್ತಿ ನೀಡುವಾಗ ನಿಯಮದಂತೆ ಶೇಕಡ. 50% ರಲ್ಲಿ ಕೇವಲ 5 ಜನ ದ್ವಿತೀಯ ದರ್ಜೆ ಸಹಾಯಕರು ಸಹಿತ ಬೆರಳಚ್ಚುಗಾರರಿಗೆ ಬಡ್ತಿ ನೀಡಲಾಗುತ್ತಿದ್ದು ಬಡ್ತಿ ಪ್ರಮಾಣ ಕಡಿಮೆ ಇರುವ ಬಗ್ಗೆ ತಿಳಿಸಿ ಈ ಎರಡು ವೃಂದಗಳಿಗೆ ಪ್ರತ್ಯೇಕವಾಗಿ ಬಡ್ತಿ ನೀಡುವ ಬದಲು ಎರಡು ವೃಂದಗಳನ್ನು ಒಟ್ಟಿಗೆ ಸೇರಿಸಿ ಬಡ್ತಿ ನೀಡಿದ್ದಲ್ಲಿ ಒಂದೇ ವೃಂದದ ಎಲ್ಲಾ ನೌಕರರಿಗೂ ಸಮಾನತೆ ನೀಡಿದ ಹಾಗೆ ಆಗುತ್ತದೆ ಎಂದು ಪ್ರಸ್ತಾವನೆಯನ್ನು ನೀಡಿರುತ್ತಾರೆ.

ಸಾರ್ವಜನಿಕ ಶಿಕ್ಷಣ ಇಲಾಖೆಯ ಎರಡು ಬೋಧಕೇತರ ವೃಂದಗಳಾದ ದ್ವಿತೀಯ ದರ್ಜೆ ಸಹಾಯಕರು ಮತ್ತು ದ್ವಿತೀಯ ದರ್ಜೆ ಸಹಾಯಕರು ಸಹಿತ ಬೆರಳಚ್ಚುಗಾರರ ಹುದ್ದೆಗಳನ್ನು ವಿಲೀನಗೊಳಿಸುವ ಸಂಬಂಧ ಇರುವ ಸಾಧಕ ಭಾದಕಗಳನ್ನು ಪರಿಶೀಲಿಸುವ ಅವಶ್ಯಕತೆ ಇರುತ್ತದೆ.

ಈ ಕ್ರಮದಿಂದ ಬಾಧಿತರಾಗುವವರು ಸಲಹೆ / ಸೂಚನೆ/ ಅಭಿಪ್ರಾಯ/ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿರುತ್ತದೆ. ಅದರಂತೆ ಸಲಹೆ / ಸೂಚನೆ/ ಅಭಿಪ್ರಾಯ/ ಆಕ್ಷೇಪಣೆಗಳನ್ನು ಈ ಸುತ್ತೋಲೆ ಹೊರಡಿಸಿದ 30 ದಿನದೊಳಗೆ ಈ ಕಛೇರಿಯ ಶ್ರೀ. ಹೆಚ್. ಆರ್ ನಾಗೇಶ್, ಸಹಾಯಕ ನಿರ್ದೇಶಕರು (ಆಡಳಿತ) ಇವರಿಗೆ ಸಲ್ಲಿಸ ಬಹುದಾಗಿದೆ. ನಿಗಧಿತ ದಿನಾಂಕದ ನಂತರ ಸಲ್ಲಿಸುವ ಸಲಹೆ / ಸೂಚನೆ/ ಅಭಿಪ್ರಾಯ/ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

[ಮಂಜುನಾಥ.ಸಿ]

ಜಂಟಿ ನಿರ್ದೇಶಕರು[ಆಡಳಿತ]

ಇವರಿಗೆ:-

1. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ
3. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ
4. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹ ನಿರ್ದೇಶಕರುಗಳಿಗೆ
5. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಿಟಿಇ ಪ್ರಾಂಶುಪಾಲರುಗಳಿಗೆ
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ
7. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಡಯಟ್ ಪ್ರಾಂಶುಪಾಲರುಗಳಿಗೆ
8. ಸಾರ್ವಜನಿಕ ಶಿಕ್ಷಣ ಇಲಾಖೆಯ ಸಂಬಂದಿಸಿದ ಎಲ್ಲಾ ಕಛೇರಿಗಳ ಮುಖ್ಯಸ್ಥರು

9. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
10. ಸಂಬಂದಿಸಿದ ಸರ್ಕಾರಿ ಪ್ರೌಢ ಶಾಲೆ ಮುಖ್ಯಸ್ಥರಿಗೆ (ಕ್ಷೇತ್ರಶಿಕ್ಷಣಾಧಿಕಾರಿಗಳ ಮೂಲಕ)
11. ಈ ಕಛೇರಿಯ ಎಲ್ಲಾ ಶಾಖಾಧಿಕಾರಿಗಳಿಗೆ
12. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೆ ಇಲಾಖೆಯ ಅಧಿಕೃತ ವೆಬ್ ಸೈಟ್ www.schooleducation.kar.nic.in ನಲ್ಲಿ ಪ್ರಕಟಿಸಲು ತಿಳಿಸಿದೆ.
13. ಮಾನ್ಯ ಆಯುಕ್ತರ ಆಪ್ತ ಶಾಖೆಗೆ

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಡಿಕಟ್ಟಡ ಬೆಂಗಳೂರು.
2. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು-560001.
3. ಕಛೇರಿ ಪ್ರತಿ.